ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಚಿತ್ತರಗಿಯ ವಿಜಯ ಮಹಾಂತೇಶ ಸ್ವಾಮಿಗಳ ಹುಟ್ಟು ಹಬ್ಬ ಆಚರಣೆ ಬಗ್ಗೆ

ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :-

660 (757) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂ ಸ್ಕೃ ತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿತ್ತರಗಿ ಶ್ರೀ ವಿಜಯ ಮಹಾಂತೇಶ ಸಂಸ್ಥಾನದ ಮಠಾಧಿಪತಿ ಲಿಂ. ಶ್ರೀ ಮ.ನಿ.ಪ್ರ.ಡಾ: ಮಹಾಂತಸ್ವಾಮಿಗಳವರ ಹುಟ್ಟು ಹಬ್ಬವನ್ನು 2018ನೇ ಸಾಲಿನಲ್ಲಿ ರೂ. 69.00 ಲಕ್ಷಗಳ ಅನುದಾನ ಬಿಡುಗಡೆಯೊಂದಿಗೆ ಆಚರಣೆ ಮಾಡಲು ಆದೇಶವಾಗಿದ್ದರೂ ಸಹ 2019, 2020ನೇ ಸಾಲಿನಿಂದ ಆಚರಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಎರಡು ವರ್ಷಗಳಿಂದ ಆಚರಣೆ ಮಾಡದೆ ಇರಲು ಕಾರಣಗಳೇನು; ಈ ಬಗ್ಗೆ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ;

(ಇ) 2021ನೇ ಸಾಲಿನಿಂದ ಪ್ರತಿವರ್ಷ ಈ ಕಾರ್ಯಕ್ರಮವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ? (ಸಂಪೂರ್ಣ ವರದಿ ನೀಡುವುದು)